**O.S** 51/2022

**PW**–1

ಸಾಕ್ಷಿಗೆ ವಿಧಿಬದ್ಧವಾಗಿ ದಿನಾಂಕ **12.01.2024** ರಂದು ಪ್ರಮಾಣ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಖ್ಯ ವಿಚಾರಣೆ: ವಾದಿ ಪರ ವಕೀಲರಾದಃ ಶ್ರೀ **M.R** ರವರಿಂದ

ನಾನು ನನ್ನ ಮುಖ್ಯ ವಿಚಾರಣೆಯ ಸಲುವಾಗಿ ಪ್ರಮಾಣ ಪತ್ರವನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಾನು ಕೊಟ್ಟ ಮಾಹಿತಿಯ ಮೇರೆಗೆ ವಕೀಲರು ತಯಾರಿಸಿರುತ್ತಾರೆ. ನಾನು ಅದರಲ್ಲಿರುವ ಎಲ್ಲಾ ಅಂಶಗಳನ್ನು ತಿಳಿದುಕೊಂಡು ನಂತರ ಸಹಿಯನ್ನು ಮಾಡಿರುತ್ತೇನೆ. ಸದರಿ ಪ್ರಮಾಣ ಪತ್ರದಲ್ಲಿರುವ ಎಲ್ಲಾ ಸಂಗತಿಗಳು ಸತ್ಯವಾಗಿರುತ್ತದೆ.

Sy. No.29/1, 29/2, 19/4, 19/9 ಮತ್ತು 19/10 ಇವುಗಳಿಗೆ ಸಂಬಂಧಿಸಿದ ಒಂದೊಂದು ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿರುತ್ತೇನೆ ಅವುಗಳನ್ನು ಅದೇ ಕ್ರಮಾನುಸಾರವಾಗಿ ನಿಪಿ–1 ರಿಂದ 5 ಎಂದು ಗುರುತಿಸಲಾಯಿತು.

ಒಂದು ಅಸಸ್ ಮೆಂಟ್ ನ ದೃಢೀಕೃತ ನಕಲನ್ನು ಹಾಜರುಪಡಿಸಿರುತ್ತೇನೆ, ಅದನ್ನು ನಿಪಿ–6 ಎಂದು ಗುರುತಿಸಲಾಯಿತು.

ನಮ್ಮ ವಂಶವೃಕ್ಷದ ಪ್ರಮಾಣ ಪತ್ರವನ್ನು ಹಾಜರುಪಡಿಸಿರುತ್ತೇನೆ, ಅದನ್ನು ನಿಪಿ–7 ಎಂದು ಗುರುತಿಸಲಾಯಿತು.

ನನ್ನ ತಾಯಿ ಮಹದೇವಮ್ಮ ರವರ ಮರಣ ಪ್ರಮಾಣ ಪತ್ರವನ್ನು ಹಾಜರುಪಡಿಸಿರುತ್ತೇನೆ, ಅದನ್ನು ನಿಪಿ–8 ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ವಾದಿ ಪರ ವಕೀಲರು ಮುಂದಿನ ಮುಖ್ಯ ವಿಚಾರಣೆಗೆ ಸಮಯಾವಕಾಶ ಕೋರಿದ್ದರಿಂದ ಆಲಿಸಿ ನೀಡಲಾಯಿತು)

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಒ

12.01.2024.
ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾದ ನ್ಯಾಯಾಲಯ ಯಳಂದೂರು.